Bangalore
Regional News
17.11.2025: 14.30hrs
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

ಮುಖ್ಯಾಂಶಗಳು :

**1.** ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಂಜೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ಕಬ್ಬು ಬೆಳೆಗಾರರ ಸಮಸ್ಯೆ ಕುರಿತಂತೆ ಚರ್ಚೆ

**2.** ನಾಳೆ ಬೆಂಗಳೂರಿನಲ್ಲಿ ಟೆಕ್ ಶೃಂಗಸಭೆ-೨೦೨೫; ಕೃತಕ ಬುದ್ಧಿಮತ್ತೆ ಕಂಪ್ಯೂಟರ್ ಬಿಡುಗಡೆಗೆ ಸರ್ಕಾರ ನಿರ್ಧಾರ

**3.** ಇಸ್ರೋದಿಂದ ೧೧ ವಿಶ್ವ ದಾಖಲೆಗಳ ನಿರ್ಮಾಣ - ಇಸ್ರೋ ಅಧ್ಯಕ್ಷ ವಿ. ನಾರಾಯಣನ್ ಸ್ಪಷ್ಟನೆ

**4.** ಐತಿಹಾಸಿಕ ಬಸವನಗುಡಿ ಕಡಲೆಕಾಯಿ ಪರಿಷೆಗೆ ಸಚಿವ ರಾಮಲಿಂಗಾ ರೆಡ್ಡಿ ಚಾಲನೆ

**5.** ಬೆಂಗಳೂರಿನಲ್ಲಿ ಐಟಿ ಉದ್ಯೋಗಿಗೆ ಡಿಜಿಟಲ್ ಬಂಧನ; ೩೧ ಕೋಟಿ ೮೩ ಲಕ್ಷ ರೂಪಾಯಿ ಕಳೆದುಕೊಂಡ ಮಹಿಳೆ

******

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಸಂಜೆ ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿಯಾಗಿ, ಕಬ್ಬು ಬೆಳೆಗಾರರ ಸಮಸ್ಯೆ ಕುರಿತಂತೆ ಚರ್ಚೆ ನಡೆಸಲಿದ್ದಾರೆ. ಇದೇ ವೇಳೆ ನೀರಾವರಿ ಯೋಜನೆಗಳ ಕುರಿತು ಚರ್ಚಿಸಲಿದ್ದಾರೆ. ಮಳೆಹಾನಿ ಪರಿಹಾರಕ್ಕೆ ನೆರವು ಹಾಗೂ ಬೆಂಗಳೂರು ಅಭಿವೃದ್ಧಿಗೆ ಹೆಚ್ಚಿನ ಅನುದಾನ ನೀಡುವಂತೆ ಮನವಿ ಸಲ್ಲಿಸುವ ಸಾಧ್ಯತೆ ಇದೆ. ರಾಜ್ಯದ ಹಿತ ಕಾಯುವ ನಿಟ್ಟಿನಲ್ಲಿ ಭದ್ರಾ ಮೇಲ್ದಂಡೆ, ಹೇಮಾವತಿ ಯೋಜನೆ ಜಾರಿ ಹಾಗೂ ಜಿಎಸ್‌ಟಿ ಅನುದಾನ ಹಂಚಿಕೆಯಲ್ಲಿ ಆಗುತ್ತಿರುವ ತಾರತಮ್ಯದ ಬಗ್ಗೆಯೂ ಪ್ರಧಾನಿ ಅವರ ಗಮನಕ್ಕೆ ತರಲಿದ್ದಾರೆ.

******

ಬೆಲೆಯನ್ನು ಕೇಂದ್ರ ಸರ್ಕಾರ ನಿರ್ಧಾರ ಮಾಡಬೇಕಿದ್ದು, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ, ಪ್ರಧಾನಮಂತ್ರಿ ಅವರನ್ನು ಭೇಟಿ ಮಾಡಿ ರಾಜ್ಯದ ಕಬ್ಬುಬೆಳೆಗಾರರ ಹೋರಾಟದ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ತುಮಕೂರಿನಲ್ಲಿ ನಡೆದ ಪೊಲೀಸ್ ಕ್ರೀಡಾಕೂಟ ಉದ್ಘಾಟಿಸಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಎಸ್‌ಟಿ ಅನುದಾನ ಹಂಚಿಕೆಯಲ್ಲಿ ಆಗುತ್ತಿರುವ ತಾರತಮ್ಯದ ಬಗ್ಗೆ ಪ್ರಧಾನಿ ಅವರ ಗಮನಕ್ಕೆ ತರಲಿದ್ದಾರೆ

ಎಂದು ಹೇಳಿದ್ದಾರೆ. ಬೆಂಗಳೂರಿನ ಐಟಿ ಉದ್ಯೋಗಿಯನ್ನು ಡಿಜಿಟಲ್ ಅರೆಸ್ಟ್ ಮಾಡಿ ಸುಲಿಗೆ ಮಾಡಿರುವ ಪ್ರಕರಣ ದಾಖಲಾಗಿದ್ದು, ಪೊಲೀಸರು ಆರೋಪಿಗಳನ್ನು ಶೀಘ್ರವೇ ಬಂಧಿಸಲಿದ್ದಾರೆ ಎಂದು ವಿಶ್ವಾಸ ವ್ಯಕ್ತಪಡಿಸಿದ್ದಾರೆ.

******

ನಾಳೆ ಬೆಂಗಳೂರಿನಲ್ಲಿ ಟೆಕ್ ಶೃಂಗಸಭೆ - ೨೦೨೫ ನಡೆಯಲಿದೆ. ಈ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ, ಇದೇ ಮೊದಲ ಬಾರಿಗೆ ರಾಜ್ಯ ಸರ್ಕಾರ ಕೃತಕ ಬುದ್ಧಿಮತ್ತೆಯ ಪರ್ಸನಲ್ ಕಂಪ್ಯೂಟರ್ ಬಿಡುಗಡೆ ಮಾಡಲಿದೆ ಎಂದು ತಿಳಿಸಿದ್ದಾರೆ. ಇದೇ ಮೊದಲ ಬಾರಿಗೆ ವಿಶ್ವದಲ್ಲಿಯೇ ರಾಜ್ಯವೊಂದು ಈ ದಿಟ್ಟ ನಿರ್ಧಾರ ಕೈಗೊಂಡಿದೆ. ಈ ಕಂಪ್ಯೂಟರ್ ಅನ್ನು ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಬಿಡುಗಡೆ ಮಾಡಲಿದ್ದಾರೆ ಎಂದು ಅವರು ಹೇಳಿದ್ದಾರೆ.

******

ಭಾರತದಲ್ಲಿ ಕಾರ್ಯನಿರತ ಸಂಶೋಧನಾ ಸಂಸ್ಥೆಗಳು ಮತ್ತು ಪ್ರಯೋಗಾಲಯಗಳು ಸಮನ್ವಯದ ಮೂಲಕ ಕಾರ್ಯ ನಿರ್ವಹಿಸುವ ಜವಾಬ್ದಾರಿಯನ್ನು ಸರ್ಕಾರ ನೀಡಿದೆ ಎಂದು ಸಿಎಸ್ಐಆರ್ ಮಹಾ ನಿರ್ದೇಶಕಿ ಹಾಗೂ ಬಿಎಸ್ಐಆರ್ ಕಾರ್ಯದರ್ಶಿ ಡಾ. ಎನ್. ಕಲೈಸೆಲ್ವಿ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ಸಿಎಸ್ಐಆರ್ ಇಸ್ರೋ ಸ್ಪೇಸ್‌ಮೀಟ್ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಉದ್ದೇಶಿಸಿ ಮಾತನಾಡಿದ ಅವರು, ಸಿಎಸ್ಐಆರ್‌ನ ಎಲ್ಲಾ ಪ್ರಯೋಗಾಲಯಗಳು ಇಸ್ರೋ ಹಾಗೂ ಅನ್ಯ ಖಾಸಗಿ ಕೈಗಾರಿಕೆಗಳೊಂದಿಗೆ ಕೈಜೋಡಿಸಿ ಸಮನ್ವಯದ ಯೋಜನೆ ರೂಪಿಸಿಕೊಂಡಿದೆ ಎಂದು ಹೇಳಿದ್ದಾರೆ. ಬಳಿಕ ಮಾತನಾಡಿದ ಇಸ್ರೋ ಅಧ್ಯಕ್ಷ ವಿ. ನಾರಾಯಣನ್, ಇಸ್ರೋ ಸಂಸ್ಥೆ ೧೧ ವಿಶ್ವ ದಾಖಲೆಗಳನ್ನು ದಾಖಲಿಸಿವೆ. ಅನ್ಯ ದೇಶಗಳು ಭಾರತಕ್ಕೆ ತಂತ್ರಜ್ಞಾನ ನಿರಾಕರಿಸಿದಾಗ ದೇಶೀಯವಾಗಿ ಅತಿಕ್ಲಿಷ್ಟ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಿದೆ ಎಂದು ಹೇಳಿದರು. ಇದೇ ವೇಳೆ ವ್ಯವಸ್ಥಿತವಾಗಿ ಗುರಿ ಸಾಧಿಸಲು ಜಂಟಿ ಕಾರ್ಯ ಸಮಿತಿ ರೂಪಿಸುವಂತೆ ಅವರು ಸಲಹೆ ನೀಡಿದ್ದಾರೆ.

ಗಗನಯಾನಿ ಪ್ರಶಾಂತ್ ನಾಯರ್ ಮಾತನಾಡಿ, ಒಬ್ಬ ಗಗನಯಾನಿ ಕೇವಲ ವಿಮಾನ ಚಾಲಕನಾಗದೇ ತಂತ್ರಜ್ಞ, ಶುಶ್ರೂಷಕ, ಮಾನಸಿಕ ತಜ್ಞ ಹಾಗೂ ಛಾಯಾಗ್ರಾಹಕನಾಗಿ ವಿವಿಧ ಕೌಶಲ್ಯಗಳನ್ನು ಕರಗತಗೊಳಿಸುವುದು ಅಗತ್ಯವಾಗಿದೆ ಎಂದು ಪ್ರತಿಪಾದಿಸಿದ್ದಾರೆ.

******

೪೧ ವರ್ಷಗಳ ಹಿಂದೆ ರಷ್ಯಾ ರಾಕೆಟ್‌ನೊಂದಿಗೆ ಪ್ರಯಾಣಿಸಿದ ಗಗನಯಾನಿ ರಾಕೇಶ್ ಶರ್ಮ ಮಾತನಾಡಿ, ಮುಂದಿನ ದಿನಗಳಲ್ಲಿ ವಿವಿಧ ರಾಷ್ಟ್ರಗಳು ಚಂದ್ರ ಮತ್ತು ಮಂಗಳ ಗ್ರಹದಲ್ಲಿ ವಾಸ ಮಾಡುವ ಸಾಧ್ಯತೆಯಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

******

ಬೆಂಗಳೂರಿನ ಇತಿಹಾಸ ಪ್ರಸಿದ್ಧ ಬಸವನಗುಡಿ ಕಡಲೆಕಾಯಿ ಪರಿಷೆಗೆ ಚಾಲನೆ ದೊರೆತಿದೆ. ಮುಜರಾಯಿ ಸಚಿವ ರಾಮಲಿಂಗಾ ರೆಡ್ಡಿ ಇಂದಿನಿಂದ ಐದು ದಿನಗಳ ಕಾಲ ನಡೆಯುವ ಪರಿಷೆಗೆ ಚಾಲನೆ ನೀಡಿದರು. ಬಸವನಗುಡಿಯ ದೊಡ್ಡ ಬಸವಣ್ಣ ದೇವಾಲಯದ ಆವರಣದಲ್ಲಿ ದೊಡ್ಡ ಬಸವಣ್ಣನಿಗೆ ಕಡಲೆಕಾಯಿ ತುಲಾಭಾರ ಹಾಗೂ ೫ ಎತ್ತುಗಳಿಗೆ ಕಡಲೆಕಾಯಿ ತಿನ್ನಿಸುವ ಮೂಲಕ ಚಾಲನೆ ನೀಡಿದರು. ಬಳಿಕ ಮಾತನಾಡಿದ ಸಚಿವ ರಾಮಲಿಂಗಾ ರೆಡ್ಡಿ, ಈ ಬಾರಿ ಪ್ಲಾಸ್ಟಿಕ್ ನಿಷೇಧಿಸಲಾಗಿದೆ. ಜೊತೆಗೆ ಶುಲ್ಕ ರಹಿತ ಅಂಗಡಿಗಳನ್ನು ತೆರೆಯಲು ಅವಕಾಶ ನೀಡಲಾಗಿದೆ ಎಂದು ತಿಳಿಸಿದ್ದಾರೆ. ಸಮಾರಂಭದಲ್ಲಿ ಶಾಸಕರಾದ ರವಿ ಸುಬ್ರಹ್ಮಣ್ಯ, ಉದಯ ಗರುಡಾಚಾರ್, ಸಂಸದ ತೇಜಸ್ವಿ ಸೂರ್ಯ ಉಪಸ್ಥಿತರಿದ್ದರು. ಇಂದಿನಿಂದ ಶುಕ್ರವಾರದವರೆಗೆ ಪರಿಷೆ ನಡೆಯಲಿದೆ.

******

ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಕಾರ್ತಿಕ ಮಾಸದ ಕಡೆಯ ಸೋಮವಾರದ ಅಂಗವಾಗಿ ವಿವಿಧ ದೇವಾಲಯಗಳಲ್ಲಿ ಇಂದು ವಿಶೇಷ ಅಲಂಕಾರ ಹಾಗೂ ಪೂಜಾ ಕೈಂಕರ್ಯಗಳನ್ನು ಹಮ್ಮಿಕೊಳ್ಳಲಾಗಿದೆ. ಇದೇ ವೇಳೆ ಚಂದ್ರಮೌಳೇಶ್ವರ ಸ್ವಾಮಿ ಬ್ರಹ್ಮ ರಥೋತ್ಸವ ವಿಜೃಂಭಣೆಯಿಂದ ನೆರವೇರಿತು. ಬಯಲು ಬಸವಣ್ಣ ದೇವಾಲಯದ ಸಮೀಪ ಹಾಗೂ ದೇವನಹಳ್ಳಿಯ ಪಾರಿವಾಳ ಗುಡ್ಡದ ಆಂಜನೇಯಸ್ವಾಮಿ ದೇವಾಲಯದಲ್ಲಿ ಕಡಲೇಕಾಯಿ ಪರಿಷೆ ನಡೆಯಿತು.

******

ಬೆಂಗಳೂರಿನ ಮಹಿಳಾ ಟೆಕ್ಕಿಯೊಬ್ಬರು ಕಳೆದ ಆರು ತಿಂಗಳಿನಿಂದ ಡಿಜಿಟಲ್ ಬಂಧನದಲ್ಲಿ ಸಿಲುಕಿ, ૩೧ ಕೋಟಿ ೮೩ ಲಕ್ಷ ರೂಪಾಯಿ ಕಳೆದುಕೊಂಡಿದ್ದಾರೆ. ಸಂತ್ರಸ್ತೆ ೧೮೭ ವಹಿವಾಟುಗಳಲ್ಲಿ ೩೧ ಕೋಟಿ ರೂಪಾಯಿ ವರ್ಗಾಯಿಸಿದ್ದಾರೆ. ರಾಜ್ಯದಲ್ಲಿ ದಾಖಲಾದ ಅತಿ ದೊಡ್ಡ ಡಿಜಿಟಲ್ ಬಂಧನ ಪ್ರಕರಣ ಇದಾಗಿದೆ. ಸಂತ್ರಸ್ತೆ ನವೆಂಬರ್ ೧೪ರಂದು ಸೈಬರ್ ಕ್ರೈಂ ಪೊಲೀಸರಿಗೆ ದೂರು ನೀಡಿದ್ದು, ಆರೋಪಿಗಳಿಗಾಗಿ ಪೊಲೀಸರು ಶೋಧ ನಡೆಸುತ್ತಿದ್ದಾರೆ. ಸಂತ್ರಸ್ತೆಯ ಸ್ಥಿರ ಠೇವಣಿ ಹೊರತುಪಡಿಸಿ, ಆಕೆಯ ಎಲ್ಲಾ ಉಳಿತಾಯ ಹಾಗೂ ಠೇವಣಿಯನ್ನು ಆರೋಪಿಗಳು ವರ್ಗಾಯಿಸಿಕೊಂಡಿದ್ದಾರೆ.

******

ವಿಶ್ವ ಮಧುಮೇಹ ದಿನಾಚರಣೆ ಅಂಗವಾಗಿ ಇಂದು ಬಳ್ಳಾರಿಯಲ್ಲಿ ಜಿಲ್ಲಾಡಳಿತ, ಮಹಾನಗರ ಪಾಲಿಕೆ, ಆರೋಗ್ಯ ಇಲಾಖೆಯಿಂದ ಮಧು ಮೇಹದ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವ ವಾಕಥಾನ್ ನಡೆಯಿತು. ಮಧುಮೇಹ ಮತ್ತು ಯೋಗಕ್ಷೇಮ ಘೋಷವಾಕ್ಯದೊಂದಿಗೆ ಜಿಲ್ಲಾ ಆಸ್ಪತ್ರೆ ಆವರಣದಿಂದ ಆರಂಭಗೊಂಡ ವಾಕಥಾನ್‌ನಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿ, ವೈದ್ಯಕೀಯ ವಿದ್ಯಾರ್ಥಿಗಳು ಸಕ್ಕರೆ ಕಾಯಿಲೆ ಬಗ್ಗೆ ಅರಿವು ಮೂಡಿಸುವ ಘೋಷವಾಕ್ಯದ ಫಲಕಗಳನ್ನು ಹಿಡಿದು ಸಾಗಿದರು.

******

ಉಕ್ಕಿನ ಮನುಷ್ಯ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆ ಅಂಗವಾಗಿ ಚಿಕ್ಕಬಳ್ಳಾಪುರದಲ್ಲಿಂದು ಏಕತಾ ಪಾದಯಾತ್ರೆ ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮೈ ಭಾರತ್ ಕೇಂದ್ರ ಹಾಗೂ ರಾಷ್ಟ್ರೀಯ ಸೇವಾ ಯೋಜನೆ ಘಟಕಗಳ ಸಹಯೋಗದಲ್ಲಿ ಆಯೋಜಿಸಿದ್ದ ಕಾರ್ಯಕ್ರಮಕ್ಕೆ ಸಂಸದ ಡಾ.ಕೆ.ಸುಧಾಕರ್ ಚಾಲನೆ ನೀಡಿದರು. ಜಿಲ್ಲಾಡಳಿತದ ಅಧಿಕಾರಿಗಳು, ವಿವಿಧ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಏಕತಾ ಪಾದಯಾತ್ರೆಯಲ್ಲಿ ಹೆಜ್ಜೆ ಹಾಕಿ ಸರ್ದಾರ್ ವಲ್ಲಭಭಾಯಿ ಪಟೇಲ್ ಅವರಿಗೆ ಪುಷ್ಪನಮನ ಸಲ್ಲಿಸಿದರು. ಹಾಸನದಲ್ಲಿಯೂ ಸರ್ದಾರ್ ವಲ್ಲಭಬಾಯ್ ಪಟೇಲ್‌ರವರ ೧೫೦ನೇ ಜನ್ಮ ದಿನೋತ್ಸವದ ಪ್ರಯುಕ್ತ ಹಾಸನದ ರೈಲ್ದಾಣದ ಆವರಣದಿಂದ ಹಾಸನಾಂಬ ಕಲಾಕ್ಷೇತ್ರದವರೆಗೆ ಪಾದಯಾತ್ರೆ ನಡೆಯಿತು.

***END***